# ಕರ್ನಾಟಕಸರ್ಕಾರ

ಸಂಖ್ಯೆ: ಸಿಆಸುಇ 123 ಡಿಬಿಎಂ 2020(ಭಾಗ)

ಕರ್ನಾಟಕಸರ್ಕಾರದಸಚಿವಾಲಯ
ವಿಧಾನಸೌಧ,
ಬೆಂಗಳೂರು, ದಿನಾಂಕ:18 .04.2020.

## ಸುತ್ತೋಲೆ

ಕರ್ನಾಟಕ ರಾಜ್ಯದಲ್ಲಿ ಕೊರೊನಾ ವೈರಸ್ (ಕೋವಿಡ್-19) ಸಾಂಕ್ರಾಮಿಕವಾಗಿ ಹರಡುತ್ತಿರುವ ಹಿನ್ನಲೆಯಲ್ಲಿ ಸಚಿವಾಲಯ ಸೇರಿದಂತೆ ರಾಜ್ಯಮಟ್ಟದ ಕಛೇರಿಗಳಲ್ಲಿ ಅಧಿಕಾರಿ ಹಾಗೂ ನೌಕರರು ಕಛೇರಿ ಕೆಲಸಕ್ಕೆ ಹಾಜರಾಗುವ ಬಗ್ಗೆ ಸಂಖ್ಯೆ: ಸಿಆಸುಇ 123 ಡಿಬಿಎಂ 2020(ಭಾಗ), ದಿನಾಂಕ: 18.04.2020ರಂದು ಸುತ್ತೋಲೆ ಹೊರಡಿಸಲಾಗಿದೆ. ಸದರಿ ಸುತ್ತೋಲೆಯನ್ವಯ ರಾಜ್ಯ ಸಚಿವಾಲಯ/ಇಲಾಖೆಗಳ ಗ್ರೂಪ್ ಎ ಮತ್ತು ಗ್ರೂಪ್ ಬಿ ವೃಂದಗಳ ಎಲ್ಲಾ ಅಧಿಕಾರಿಗಳು ಮತ್ತು ಗ್ರೂಪ್-ಸಿ ಹಾಗೂ ಗ್ರೂಪ್-ಡಿ ವೃಂದಗಳ ಶೇಕಡಾ 33 ರಷ್ಟು ಸಿಬ್ಬಂದಿಗಳು ಕರ್ತವ್ಯಕ್ಕೆ ಹಾಜರಾಗಬೇಕಾಗಿದೆ.

ಸಚಿವಾಲಯವನ್ನು ಒಳಗೊಂಡಂತೆ ಬೆಂಗಳೂರಿನಲ್ಲಿರುವ ಪ್ರತಿ ಇಲಾಖೆಯ ಮುಖ್ಯಸ್ಥರುಗಳು ಅವರ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಯಾವ ಯಾವ ನೌಕರರು ಕಛೇರಿಗೆ ಹಾಜರಾಗಬೇಕು ಎನ್ನುವ ಬಗ್ಗೆ ತೀರ್ಮಾನ ತೆಗೆದುಕೊಳ್ಳುವುದು. ಹಾಗೂ ಈ ಸಂಬಂಧ ಪ್ರತಿ ಇಲಾಖೆಯಿಂದ ಒಬ್ಬ ನೋಡಲ್ ಅಧಿಕಾರಿಯನ್ನು ನೇಮಿಸುವುದು.

ಸಂಬಂಧಪಟ್ಟ ನೋಡಲ್ ಅಧಿಕಾರಿಯವರು ಕರ್ತವ್ಯಕ್ಕೆ ಹಾಜರಾಗುವ ಅಧಿಕಾರಿ / ನೌಕರರ ವಿಳಾಸವನ್ನು ಸಂಗ್ರಹಿಸಿ, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ನೋಡಲ್ ಅಧಿಕಾರಿಯವರೊಂದಿಗೆ ಸಮನ್ವಯ ಮಾಡಿಕೊಂಡು, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯು ಹೊರಡಿಸಿರುವ ಸುತ್ತೋಲೆ ಸಂಖ್ಯೆ: ಬೆಂ.ಮ.ಸಾ.ಸಂಸ್ಥೆ:ಕೇಕ:ಸಂವಾ:06.2020-21, ದಿನಾಂಕ: 18.04.2020ರನ್ವಯ ಒಪ್ಪಂದದ ಆಧಾರದ ಮೇಲೆ ಸಾರಿಗೆ ವ್ಯವಸ್ಥೆಯನ್ನು ಏರ್ಪಾಡು ಮಾಡಲು ಕ್ರಮಕೈಗೊಳ್ಳುವುದು.

Hemalatha P

(ಪಿ.ಹೇಮಲತ)
ಸರ್ಕಾರದ ಕಾರ್ಯದರ್ಶಿ
ಸಿಆಸುಇ ಇಲಾಖೆ.

**ಇವರಿಗೆ:-**

1. ಸರ್ಕಾರದ ಎಲ್ಲಾ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿಗಳು / ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿ / ವಿಶೇಷಕಾರ್ಯದರ್ಶಿಗಳಿಗೆ.
2. ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ
3. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ